# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯ ಮಟ್ಟದಲ್ಲಿ ಹಿರಿಯ ನಾಗರಿಕರಿಗಾಗಿ ಸಂಪನ್ಮೂಲ ಕೋಶವನ್ನು ಸ್ಥಾಪಿಸುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಮಮಇ 116 ಪಿಹೆಚ್‌ಪಿ 2016, ದಿ:5.5.2016.
2. ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರಸಬಲೀಕರಣ ಇಲಾಖೆ ಇವರ ಪತ್ರ ಸಂಖ್ಯೆ:ವಿಹಿನಾ ಸಇ/ ಹೊಯೊ/05/ಹಿ.ನಾ.ಸಂಪನ್ಮೂಲ ಕೇಂದ್ರ/2016-17/352, ದಿ:29.03.2016 ಮತ್ತು 31.05.2017.

1089
7/10/17

**ಪ್ರಸ್ತಾವನೆ:**

ಜೀವನದ ಸಂಧ್ಯಾಕಾಲದಲ್ಲಿರುವ ಹಿರಿಯ ನಾಗರಿಕರು ಒಂಟಿತನ, ಮಾನಸಿಕ ತುಮುಲ, ಆರ್ಥಿಕ ಮುಗ್ಗಟ್ಟು, ಅನಾರೋಗ್ಯ, ಮುಂತಾದ ಸಮಸ್ಯೆಗಳಲ್ಲಿ ಸಿಲುಕಿ ತೊಳಲಾಡುತ್ತಿದ್ದಾರೆ. ವಯೋವೃದ್ದರ ಈ ಸಮಸ್ಯೆಗಳನ್ನು ಬಗೆಹರಿಸಿ, ಸಂಧ್ಯಾಕಾಲದಲ್ಲಿ ನೆಮ್ಮದಿಯ ಬದುಕು ಸಾಗಿಸಲು ಅನುವುಮಾಡಿಕೊಡುವುದು ಇಂದಿನ ಸಮಾಜದ ಹಾಗೂ ಸರ್ಕಾರದ ಆದ್ಯ ಕರ್ತವ್ಯವಾಗಿರುತ್ತದೆ. ಈ ದಿಸೆಯಲ್ಲಿ ಕೇಂದ್ರ ಸರ್ಕಾರವು "ಹಿರಿಯ ನಾಗರಿಕರ ರಾಷ್ಟ್ರ ನೀತಿ"ಯನ್ನು ರೂಪಿಸಿ ಅನುಷ್ಠಾನಗೊಳಿಸುತ್ತಿದ್ದು, ಅದರಂತೆ ಎಲ್ಲಾ ರಾಜ್ಯಗಳು ಹಿರಿಯ ನಾಗರಿಕರ ರಾಜ್ಯ ನೀತಿಯನ್ನು ಅನುಷ್ಠಾನಗೊಳಿಸುವಂತೆ ಆದೇಶಿಸಿದೆ. ಪ್ರಯುಕ್ತ ಕರ್ನಾಟಕ ರಾಜ್ಯದಲ್ಲಿಯೂ ಸಹ "ಹಿರಿಯ ನಾಗರಿಕರ ರಾಜ್ಯನೀತಿ"ಯನ್ನು ಅನುಷ್ಠಾನಗೊಳಿಸಲಾಗುತ್ತಿದೆ.

ಹಿರಿಯ ನಾಗರಿಕರು ಎದುರಿಸುತ್ತಿರುವ ಸಮಸ್ಯೆಗಳಿಗೆ ಪರಿಹಾರ ಒದಗಿಸಲು, ಹಿರಿಯರು ಮತ್ತು ಕಿರಿಯರಿಗೆ ಸಮಾಲೋಚನಾ ಸೌಲಭ್ಯ ಕಲ್ಪಿಸಲು, ಹಿರಿಯ ನಾಗರಿಕರಿಗಾಗಿ ರಾಜ್ಯ ಮತ್ತು ಕೇಂದ್ರ ಸರ್ಕಾರದಿಂದ ದೊರೆಯುವ ಸೌಲಭ್ಯಗಳು ಮತ್ತು ಲಭ್ಯವಿರುವ ಕಾನೂನುಗಳ ಅರಿವನ್ನು ಮೂಡಿಸಿ ಎಲ್ಲಾ ಸೌಲಭ್ಯಗಳನ್ನು ಪಡೆಯುವಂತೆ ಮಾಡುವುದು ಮತ್ತು ಹಾಲಿ ಅನುಷ್ಠಾನದಲ್ಲಿರುವ ವಿವಿಧ ಯೋಜನೆಗಳ ಪ್ರಗತಿಯನ್ನು ಕ್ರೋಢಿಕರಿಸುವುದು ಹಾಗೂ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಸಂಶೋಧನೆಯನ್ನು ಕೈಗೊಂಡು ಅವರ ಬೇಡಿಕೆಗೆ ಅನುಸಾರವಾಗಿ ಹೊಸ ಯೋಜನೆಗಳನ್ನು ರೂಪಿಸುವುದು ಮುಂತಾದ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ರಾಜ್ಯ ಮಟ್ಟದ ಹಿರಿಯ ನಾಗರಿಕರ ಸಂಪನ್ಮೂಲ ಕೇಂದ್ರ (ಕೋಶ) ವನ್ನು ತೆರೆಯುವ ಅವಶ್ಯಕತೆ ಇರುತ್ತದೆ.

ಸದರಿ ವಿಷಯಕ್ಕೆ ಸಂಬಂಧಿಸಿದಂತೆ ದಿನಾಂಕ:08.02.2017ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ನಡೆಸಲಾದ ಸಭೆಯಲ್ಲಿ ನಿಮ್ಹಾನ್ಸ್ ವತಿಯಿಂದ ರಾಜ್ಯ ಮಟ್ಟದಲ್ಲಿ ಹಿರಿಯ ನಾಗರಿಕರಿಗಾಗಿ ಸಂಪನ್ಮೂಲ ಕೋಶವನ್ನು ಆರಂಭಿಸಲು ಸಿಬ್ಬಂಧಿಗಳ ವಿವರ ಹಾಗೂ ಸಿಬ್ಬಂದಿಗಳನ್ನು ಗೌರವಧನದ ಆಧಾರದಲ್ಲಿ ಆಯ್ಕೆ ಮಾಡಲು ಸಮಿತಿಯನ್ನು ರಚಿಸಲಾಗಿರುತ್ತದೆ. ರಾಜ್ಯ ಮಟ್ಟದ ಹಿರಿಯ ನಾಗರಿಕರ ಸಂಪನ್ಮೂಲ ಕೇಂದ್ರ(ಕೋಶ)ವನ್ನು "ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನ್ಯೂರೋಸೈನ್ಸ್" (ನಿಮ್ಹಾನ್ಸ್) ಮೂಲಕ ಆರಂಭಿಸಲು ಮೇಲೆ ಕ್ರಮಾಂಕ(1)ರಲ್ಲಿ ಓದಲಾದ ಆಡಳಿತಾತ್ಮಕ ಆದೇಶ ಹೊರಡಿಸಲಾಗಿದೆ.

26/10

...2

ಉಲ್ಲೇಖ (2)ರ ಪತ್ರದಲ್ಲಿ ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ರವರು ರಾಜ್ಯ ಮಟ್ಟದ ಹಿರಿಯ ನಾಗರಿಕರ ಸಂಪನ್ಮೂಲ ಕೇಂದ್ರವನ್ನು ಪ್ರಾರಂಭಿಸಲು ಬಾಹ್ಯ ಮೂಲದಿಂದ ಹುದ್ದೆಗಳನ್ನು ಸೃಜಿಸಿ ಆದೇಶ ಹೊರಡಿಸಲು ಕೋರಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಮಮಇ 116 ಪಿಹೆಚ್‌ಪಿ 2016,ಬೆಂಗಳೂರು, ದಿನಾಂಕ:03.10.2017**

ಸರ್ಕಾರದ ಆದೇಶ ಸಂಖ್ಯೆ: ಮಮಇ 116 ಪಿಹೆಚ್‌ಪಿ 2016, ದಿ: 05.02.2015ರಲ್ಲಿ ರಾಜ್ಯ ಮಟ್ಟದ ಹಿರಿಯ ಸಂಪನ್ಮೂಲ ಕೇಂದ್ರವನ್ನು "ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನ್ಯೂರೋಸೈನ್ಸ್" (ನಿಮ್ಹಾನ್ಸ್) ಮೂಲಕ ಪ್ರಾರಂಭಿಸಲು ಈ ಕೆಳಕಂಡಂತೆ ಭಾಗ-1 ರಲ್ಲಿ ತಿಳಿಸಿರುವ 4 ಹುದ್ದೆಗಳನ್ನು 1 ವರ್ಷದ ಅವಧಿಗೆ ಅಥವಾ ಮುಂದಿನ ಆದೇಶ ಇವುಗಳಲ್ಲಿ ಯಾವುದು ಮೊದಲೊ ಅಲ್ಲಿಯವರೆಗೆ ನಿಯಮಾನುಸಾರ ಬಾಹ್ಯ ಮೂಲದಿಂದ ಹುದ್ದೆಗಳನ್ನು ತುಂಬಲು ಹಾಗೂ ಭಾಗ-2ರಲ್ಲಿ ತಿಳಿಸಿರುವ ಆಡಳಿತಾತ್ಮಕ ವೆಚ್ಚಗಳಿಗೆ ಸಂಬಂದಿಸಿದಂತೆ ಲೋಕೋಪಯೋಗಿ ಇಲಾಖೆ ವಿಧಿಸುವ ಕಟ್ಟಡದ ಬಾಡಿಗೆ ದರ ಅಥವಾ ಪ್ರಸ್ತಾವನೆಯಲ್ಲಿ ತಿಳಿಸಿರುವ ಬಾಡಿಗೆ ದರ ಇವುಗಳಲ್ಲಿ ಯಾವುದು ಕಡಿಮೆಯೊ ಅದನ್ನು ಪರಿಗಣಿಸತಕ್ಕದ್ದು. ಮತ್ತು ಅಗತ್ಯವಿರುವಕಡೆ ಕೆ.ಟಿ.ಪಿ.ಪಿ. ನಿಯಮಗಳನ್ನು ಪಾಲಿಸುವ ಷರತ್ತಿಗೊಳಪಟ್ಟು ಸರ್ಕಾರ ಅನುಮೋದನೆ ನೀಡಿದೆ.

**ಭಾಗ-1**

| ಕ್ರ.ಸಂ | ಪದನಾಮ | ಹುದ್ದೆಗಳ ಸಂಖ್ಯೆ |
|---|---|---|
| 1 | ಯೋಜನಾ ಸಂಯೋಜಕರು | 01 |
| 2 | ಕಾನೂನು ತಜ್ಞನರು | .01 |
| 3 | ಸಂಶೋಧನಾ ಅಧಿಕಾರಿಗಳು | 01 |
| 4 | ಕಂಪ್ಯೂಟರ್ ಆಪರೇಟರ್ | 01 |
| | ಒಟ್ಟು | **04** |

**ಭಾಗ-2**

| ಕ್ರ.ಸಂ | | ವೆಚ್ಚ |
|---|---|---|
| 1 | ಕಟ್ಟಡದ ಬಾಡಿಗೆ (25000*12) ಲೋಕೋಪಯೋಗಿ ಇಲಾಖೆಯಿಂದ ನಿಗಧಿಪಡಿಸಿರುವಂತೆ. | 3,00,000/- |
| 2 | ವಿದ್ಯುತ್ ವೆಚ್ಚ/ನೀರು (10000*12) | 1,20,000/- |
| 3 | ಲೇಖನ ಸಾಮಾಗ್ರಿ/ಸ್ಟ್ಯಾಂಪ್ | |
| 4 | ದೂರವಾಣಿ/ಇಂಟರ್‌ನೆಟ್ ವೆಚ್ಚ | |
| 5 | ಪ್ರಚಾರ, ಶಿಬಿರಗಳ ಆಯೋಜನೆ, ಸಂಶೋಧನಾ ಕಾರ್ಯಗಳಿಗೆ (ವಾರ್ಷಿಕ) | 9,18,000/- |
| 6 | ಕಂಪ್ಯೂಟರ್, ಯು.ಪಿ.ಎಸ್, ಪ್ರಿಂಟರ್ | 1,50,000/- |
| | ಒಟ್ಟು | 14,88,000/- |

...3

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 289 ವೆಚ್ಚ-10/2017. ದಿ:01.6.2017ರಲ್ಲಿ ನೀಡಿರುವ ಸಹಮತಿ ಮೇರೆಗೆ ಹಾಗೂ ಪ್ರಧಾನ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಲಾಗಿರುವ ಸರ್ಕಾರದ ಆದೇಶ ಸಂಖ್ಯೆ:ಎಫ್‌ಡಿ 01 ಟಿಎಫ್‌ಪಿ 2017. ದಿ:05.04.2017ರ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

03/10/2017
(ಜಯಲಕ್ಷ್ಮಿ)
ಸರ್ಕಾರದ ಅಧೀನ ಕಾರ್ಯದರ್ಶಿ-2.
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ.

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು, (ಜಿ &ಎಸ್‌ಎಸ್‌ಎ) ಕರ್ನಾಟಕ, ಹೊಸಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
2. ಪ್ರಧಾನ ಮಹಾಲೇಖಪಾಲರು, (ಇ & ಆರ ಎಸ್ ಎ) ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ". ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-560001.
3. ಪ್ರಧಾನ ಮಹಾಲೇಖಪಾಲರು, (ಎ & ಇ ) ಕರ್ನಾಟಕ, ಹೊಸ ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ:5329, ಬೆಂಗಳೂರು-560001.
4. ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರು. (ಕ್ರ.ಸಂ. 5 ರಿಂದ 8ರವರೆಗಿನ ವಿಳಾಸಗಳಿಗೆ ನಿರ್ದೇಶಕರ ಮುಖಾಂತರ ಕಳುಹಿಸುವಂತೆ ಕೋರಿದೆ)
5. ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ.
6. ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು, ನಗರ ಪಂಚಾಯತ್, ಬೆಂಗಳೂರು ನಗರ ಜಿಲ್ಲೆ.
7. ಜಿಲ್ಲಾ ಅಂಗವಿಕಲ ಕಲ್ಯಾಣಾಧಿಕಾರಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರು ನಗರ ಜಿಲ್ಲೆ.
8. ಖಜಾನಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ.
9. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-10), ವಿಧಾನ ಸೌಧ, ಬೆಂಗಳೂರು.
10. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
11. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿ ಕಟ್ಟಡ, ಬೆಂಗಳೂರು.
12. ಸರ್ಕಾರದ ಉಪ ಕಾರ್ಯದರ್ಶಿರವರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತ ಸಹಾಯಕ, ಬಹುಮಹಡಿ ಕಟ್ಟಡ, ಬೆಂಗಳೂರು.
13. ನಿರ್ದೇಶಕರು, ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನ್ಯೂರೋಸೈನ್ಸ್ (ನಿಮ್ಹಾನ್ಸ್) ಹೊಸೂರು ರಸ್ತೆ, ಬೆಂಗಳೂರು.
14. ಶಾಖಾಧಿಕಾರಿ, ಸ್ವೀಕೃತಿ ಮತ್ತು ರವಾನೆ ಶಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
15. ಶಾಖಾ ರಕ್ಷಾ ಕಡತ/ ಓ.ಡಿ.ಜಿ.ಸಿ/ ಸೂಚನಾ ಫಲಕ/ ಹೆಚ್ಚುವರಿ ಪ್ರತಿಗಳು.